## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಹಾಸನ ಜಿಲ್ಲಾ ಪಂಚಾಯತ್ ಕಛೇರಿಗೆ ಸುಸಜ್ಜಿತ ಜಿಲ್ಲಾ ಪಂಚಾಯತ್ ಕಛೇರಿ ಕಟ್ಟಡ ವಿಸ್ತರಣೆ ಹಾಗೂ ಸಭಾಂಗಣ ನಿರ್ಮಾಣ ಮಾಡುವ ಸಂಬಂಧ ನಕ್ಷೆ ಹಾಗೂ ಅಂದಾಜುಪಟ್ಟಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:-** 1)ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ಜಿ.ಪಂ.)ರವರ ಟಿಪ್ಪಣಿ ಸಂ.ಆಇ/231/ವೆಚ್ಚ-6/2017 ದಿನಾಂಕ:05-05-2017.

2)ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂಖ್ಯೆ: ಗ್ರಾಅಪ: 119: ಪಿಬಿಎಸ್:2017 ದಿನಾಂಕ:21-03-2017.

3)ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಹಾಸನ ಜಿಲ್ಲಾ ಪಂಚಾಯತ್ ರವರ ಪತ್ರ ಸಂ.ಜಿಪಂಹಾ/ ಆಡಳಿತ(1) ಜಿ.ಪಂ. ಕಟ್ಟಡ/2015-16 ದಿನಾಂಕ:28-12-2016.

****

ಮೇಲೆ ಓದಲಾದ ಕ್ರಮಸಂಖ್ಯೆ(3)ರ ಹಾಸನ ಜಿಲ್ಲಾ ಪಂಚಾಯತ್ ಪ್ರಸ್ತಾವನೆಯಲ್ಲಿ ಹಾಸನ ಜಿಲ್ಲಾ ಪಂಚಾಯತ್ ಕಛೇರಿ ಕಟ್ಟಡ ವಿಸ್ತರಣೆ ಹಾಗೂ ಸಭಾಂಗಣ ನಿರ್ಮಾಣ ಮಾಡುವ ಸಂಬಂಧ ನಕ್ಷೆ ಹಾಗೂ ಅಂದಾಜುಪಟ್ಟಿಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ ಪ್ರಸ್ತಾವನೆಯನ್ನು ಕಳುಹಿಸಿರುತ್ತಾರೆ.

ಪ್ರಸ್ತುತ ಕಾಮಗಾರಿಯನ್ನು ಮುಖ್ಯ ಅಭಿಯಂತರರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ, ಬೆಂಗಳೂರು ರವರು ಜಿಲ್ಲಾ ಪಂಚಾಯತ್, ಹಾಸನ ಕಛೇರಿಗೆ ಸುಸಜ್ಜಿತ ಜಿಲ್ಲಾ ಪಂಚಾಯತ್ ಕಛೇರಿ ಕಟ್ಟಡ ವಿಸ್ತರಣೆ ಹಾಗೂ ಸಭಾಂಗಣ ನಿರ್ಮಾಣ, ಒಳಭಾಗದ ಕಾಮಗಾರಿಗಳು, ಪೀಠೋಪಕರಣಗಳು ಹಾಗೂ ಲಿಫ್ಟ್‌ಗಳನ್ನು ಒಳಗೊಂಡಂತೆ ರೂ.**742.00** ಲಕ್ಷಗಳಿಗೆ ವಿವರವಾದ ಅಂದಾಜು ಪಟ್ಟಿಯನ್ನು, ಹಾಸನ ವೃತ್ತದ ಲೋಕೋಪಯೋಗಿ ಇಲಾಖೆಯ 2016-17ನೇ ಸಾಲಿನ ದರಪಟ್ಟಿಯಂತೆ ತಯಾರಿಸಿರುವ ಅಂದಾಜುಪಟ್ಟಿಗೆ ಹಾಗೂ ನಕ್ಷೆಗೆ ಆಡಳಿತಾತ್ಮಕ ಅನುಮೋದನೆ

ನೀಡಿ, ಅನುದಾನ ಬಿಡುಗಡೆ ಮಾಡಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾಸನ ರವರನ್ನು ಕೋರಿರುತ್ತಾರೆ.

ಪ್ರಸ್ತುತ ಹಾಸನ ಜಿಲ್ಲಾ ಪಂಚಾಯತ್ ನಲ್ಲಿ **ಲೆಕ್ಕಶೀರ್ಷಿಕೆ 2515-00-101-0-29 ಜಿಲ್ಲಾ ಪಂಚಾಯತಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ ಯಡಿ** ರೂ.200.00 ಲಕ್ಷಗಳ ಅನುದಾನ ಲಭ್ಯವಿದ್ದು ಉಳಿಕೆ ರೂ.**542.00** ಲಕ್ಷಗಳನ್ನು **2017-18**ನೇ ಸಾಲಿನ ಆಯವ್ಯಯದಲ್ಲಿ ಒದಗಿಸಿ ಕೊಡುವಂತೆ ಯೋಜನೆ, ಕಾರ್ಯಕ್ರಮ ಅನುಷ್ಠಾನ ಹಾಗೂ ಸಾಂಖ್ಯಿಕ ಇಲಾಖೆಯನ್ನು ಕೋರಿರುವುದಾಗಿ ತಿಳಿಸಿರುತ್ತಾರೆ.

ಮುಂದುವರೆದು, ಅಂದಾಜು ಪಟ್ಟಿ ಮತ್ತು ನಕ್ಷೆಗೆ ಆಡಳಿತಾತ್ಮಕ ಮಂಜೂರಾತಿ ನೀಡಲು ಹಾಗೂ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ ಸಂಸ್ಥೆಗೆ ಕಾಮಗಾರಿ ವಹಿಸಲು ಹಾಗೂ ಅನುಷ್ಠಾನ ಮಾಡಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆ ಪಾರದರ್ಶಕತೆ ಅಧಿನಿಯಮ-2000ರ ಕಲಂ 4(ಜಿ)ಯಡಿ ವಿನಾಯತಿ ನೀಡಲು ಕೋರಿರುತ್ತಾರೆ.

ಈ ಸಂಬಂಧ ಮೇಲೆ ಓದಲಾದ (2)ರಲ್ಲಿ **"ಹಾಸನ ಜಿಲ್ಲಾ ಪಂಚಾಯತ್ ಕಛೇರಿಗೆ ಸಭಾಂಗಣ ನಿರ್ಮಾಣ ಮಾಡುವ ಕುರಿತ ನಕ್ಷೆ ಹಾಗೂ ಅಂದಾಜು ಪಟ್ಟಿಗೆ ಆಡಳಿತಾತ್ಮಕ ಮಂಜೂರಾತಿ ಪಡೆದು, ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 8 ಟಿಎಫ್‌ಪಿ 2015, ಬೆಂಗಳೂರು ದಿನಾಂಕ:14-01-2016 ರಲ್ಲಿ ಪ್ರತ್ಯಾಯೋಜಿಸಿರುವ ವಿತ್ತಾಧಿಕಾರದನ್ವಯ ಮಾನ್ಯ ಪ್ರಧಾನ ಕಾರ್ಯದರ್ಶಿಯವರ ಅನುಮೋದನೆ ಪಡೆದು ಮುಂದಿನ ಕ್ರಮ ವಹಿಸಬಹುದಾಗಿರುತ್ತದೆ ಹಾಗೂ ಕೆಆರ್‌ಐಡಿಎಲ್ ಸಂಸ್ಥೆಗೆ 4(ಜಿ)ವಿನಾಯಿತಿ ಪಡೆಯುವ ಬಗ್ಗೆ ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಬಹುದಾಗಿರುತ್ತದೆ"** ಎಂದು ಆಂತರಿಕ ಆರ್ಥಿಕ **ಸಲಹೆಗಾರರು** ತಿಳಿಸಿರುತ್ತಾರೆ.

ನಂತರ ಆರ್ಥಿಕ ಇಲಾಖೆಯು ಮೇಲೆ ಓದಲಾದ ಕ್ರಮ ಸಂಖ್ಯೆ(1)ರಲ್ಲಿ **"ಆಡಳಿತ ಇಲಾಖೆಯ ಪ್ರಸ್ತಾವನೆ ಪರಿಶೀಲಿಸಿದೆ. ಪ್ರಸ್ತಾಪಿತ ಕಾಮಗಾರಿಯನ್ನು ಕೆಆರ್‌ಐಡಿಎಲ್ ಮೂಲಕ ಕೈಗೊಳ್ಳುವ ಬದಲು ಹಾಸನ ಜಿಲ್ಲಾ ಪಂಚಾಯತ್‌ನ ಅಧೀನದಲ್ಲಿ ಬರುವ ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗ,**

**ಹಾಸನ ಇವರ ಮೂಲಕ ಕೈಗೆತ್ತಿಕೊಳ್ಳುವ ಬಗ್ಗೆ ಪರಿಶೀಲಿಸಲು ಆಡಳಿತ ಇಲಾಖೆಗೆ ತಿಳಿಸಲು ಕೋರಲಾಗಿದೆ"** ಎಂದು ಆರ್ಥಿಕ ಇಲಾಖೆಯು ತಿಳಿಸಿರುವುದರಿಂದ ಸದರಿ ಪ್ರಸ್ತಾವನೆಗೆ ಆಡಳಿತಾತ್ಮಕ ಅನುಮೋದನೆ ನೀಡಲು ಸರ್ಕಾರವು ತೀರ್ಮಾನಿಸಿದೆ.

ಆದುದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂ.ಗ್ರಾಅಪ.03.ಗ್ರಾಮೂಸೌ.2017 ಬೆಂಗಳೂರು, ದಿನಾಂಕ:19-05-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, ಹಾಸನ ಜಿಲ್ಲಾ ಪಂಚಾಯತ್‌ನ ಕಛೇರಿ ಕಟ್ಟಡ ವಿಸ್ತರಣೆ ಹಾಗೂ ಸಭಾಂಗಣ ನಿರ್ಮಾಣ ಮಾಡುವ ಸಂಬಂಧ ನಕ್ಷೆ ಹಾಗೂ **ರೂ.742.00** ಲಕ್ಷಗಳ **(ರೂ.ಏಳು ನೂರ ನಲವತ್ತೆರಡು ಲಕ್ಷಗಳು ಮಾತ್ರ)** ಅಂದಾಜು ಪಟ್ಟಿಗೆ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಆಡಳಿತಾತ್ಮಕ ಅನುಮೋದನೆ ನೀಡಿದೆ:

**ಷರತ್ತುಗಳು:-**

1. ಈ ಕಾಮಗಾರಿಯನ್ನು ಜಿಲ್ಲಾ ಪಂಚಾಯತ್ ಅಧೀನದಲ್ಲಿ ಬರುವ ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗದ ಮೂಲಕ ಕೈಗೆತ್ತಿಕೊಳ್ಳಲು ತಿಳಿಸಿದೆ.

2. ಕಾಮಗಾರಿಯ ಅನುಷ್ಠಾನವನ್ನು KTPP ನಿಯಮಗಳನ್ವಯ ಕೈಗೊಳ್ಳುವುದು.

3. ಸದರಿ ಕಾಮಗಾರಿಯ ಅಂದಾಜುಪಟ್ಟಿಗೆ ಸಕ್ಷಮ ತಾಂತ್ರಿಕ ಪ್ರಾಧಿಕಾರವಾದ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ರವರಿಂದ ನಿಯಮಾನುಸಾರ ಪ್ರಸ್ತಾವನೆಗೆ ಅನುಮೋದನೆ ಪಡೆದುಕೊಂಡು ಸರ್ಕಾರಕ್ಕೆ ಸಲ್ಲಿಸುವುದು.

4. ಈ ಆದೇಶದಲ್ಲಿ ಅನುಮೋದಿಸಿರುವ ಕಟ್ಟಡ ಕಾಮಗಾರಿಯು ಜಿಲ್ಲಾ ಪಂಚಾಯತ್‌ನ ಇತರೆ ಯೋಜನೆಯಡಿ/ಕಾರ್ಯಕ್ರಮದಡಿ/ಲೆಕ್ಕಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆ ಯಾಗಿರುವುದಿಲ್ಲವೆಂಬ ಅಂಶವನ್ನು ಧೃಡಪಡಿಸಿಕೊಳ್ಳತಕ್ಕದ್ದು.

5. ಕಾಮಗಾರಿಗಳನ್ನು ಪ್ರಾರಂಭಿಸುವ ಮುನ್ನ, ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುವಾಗ ಹಾಗೂ ಮುಕ್ತಾಯದ ತರುವಾಯ ಕಟ್ಟಡದ ಛಾಯಾಚಿತ್ರಗಳನ್ನು ತೆಗೆದು **"ಗಾಂಧಿ ಸಾಕ್ಷಿ ಕಾಯಕ "** ದಲ್ಲಿ ಕಡ್ಡಾಯವಾಗಿ ಅಳವಡಿಸಿದ ನಂತರವೇ ಬಿಲ್ಲುಗಳನ್ನು ಪಾವತಿಸುವುದು.

6. ಕಾಮಗಾರಿಯ ಗುಣಮಟ್ಟ ಪರೀಕ್ಷೆಯನ್ನು ಜಿಲ್ಲಾ ಪಂಚಾಯತಿಯ ಗುಣನಿಯಂತ್ರಣ ವಿಭಾಗದಿಂದ ಪರಿವೀಕ್ಷಣೆ ಮಾಡಿಸಿ ಸರ್ಕಾರಕ್ಕೆ ಕಾಲಕಾಲಕ್ಕೆ ವರದಿ ಸಲ್ಲಿಸಬೇಕು.

7. ಈ ಆದೇಶದಂತೆ ಜಿಲ್ಲಾ ಪಂಚಾಯತಿ ಅನುಷ್ಠಾನಗೊಳಿಸಿದ ಕಾಮಗಾರಿಯ ಭೌತಿಕ ಮತ್ತು ಆರ್ಥಿಕ ಪ್ರಗತಿ ವರದಿಯನ್ನು ಪ್ರತಿ ಮಾಹೆ ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಇವರ ಮುಖಾಂತರ ಕಡ್ಡಾಯವಾಗಿ ಸರ್ಕಾರಕ್ಕೆ ಸಲ್ಲಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ **ಸಂ.ಆಇ/231/ವೆಚ್ಚ-6/2017 ದಿನಾಂಕ: 05-05-2017** ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ಕೃಷ್ಣಪ್ಪ)
ನಿರ್ದೇಶಕರು(ಗ್ರಾ.ಮೂ.ಸೌ-2) ಹಾಗೂ
ಪದ ನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿಗಳು,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ
panchayat.build@gmail.com Ph.No.080-22343509

**ಇವರಿಗೆ:-**

1.ಮಹಾಲೇಖಪಾಲರು(ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು
2.ಮಹಾಲೇಖಪಾಲರು(ಆಡಿಟ್-1), ಕರ್ನಾಟಕ, ಬೆಂಗಳೂರು
3.ಮಹಾಲೇಖಪಾಲರು(ಆಡಿಟ್-2), ಕರ್ನಾಟಕ, ಬೆಂಗಳೂರು

ಪ್ರತಿಯನ್ನು:-

1. ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿಗಳು, ಮುಖ್ಯಮಂತ್ರಿಗಳ ಕಾರ್ಯಾಲಯ, ವಿಧಾನಸೌಧ, ಬೆಂಗಳೂರು
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ಪಿಎಂಯು)(ಐಎಫ್), 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂಚಾಯತ್ ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು
7. ವಿಶೇಷಾಧಿಕಾರಿಗಳು(ಜಿಲ್ಲಾ ಪಂಚಾಯತ್) ಮತ್ತು ಪದ ನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
8. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
9. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಹಾಸನ ಜಿಲ್ಲಾ ಪಂಚಾಯತ್, ಹಾಸನ
10. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು-560 001.
11. ಕಾರ್ಯನಿರ್ವಾಹಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಹಾಸನ
12. ಜಿಲ್ಲಾ ಖಜಾನಾಧಿಕಾರಿಗಳು, ಹಾಸನ
13. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
14. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನೆ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು
15. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ-6 (ಜಿಲ್ಲಾ ಪಂಚಾಯತ್), ಆರ್ಥಿಕ ಇಲಾಖೆ, ಬೆಂಗಳೂರು
16. ಮಾಹಿತಿ ಕೇಂದ್ರಕ್ಕೆ (10 ಪ್ರತಿಗಳು)
17. ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು